# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 890

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ

ಉತ್ತರಿಸಬೇಕಾದ ಸಚಿವರು : ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 18-12-2018

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿದ್ಯಾರ್ಥಿಗಳಿಗೆ ಬಸ್‌ಪಾಸ್‌ಗಳನ್ನು ವಿತರಿಸಲಾಗುತ್ತಿದೆಯೇ: | ಹೌದು, ಬಸ್ ಪಾಸ್‌ಗಳನ್ನು ವಿತರಿಸಲಾಗುತ್ತಿದೆ. |
| ಆ) | ಹಾಗಾದಲ್ಲಿ, ಬಸ್ ಪಾಸ್ ವಿತರಣೆಯಲ್ಲಿ ಅನುಸರಿಸುತ್ತಿರುವ ಮಾನದಂಡಗಳೇನು; (ವಿವರ ನೀಡುವುದು) | ಸಾರಿಗೆ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಿಸುವ ಸಂಬಂಧ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ:<br>1. ವಿದ್ಯಾರ್ಥಿಯು ಕರ್ನಾಟಕ ಸರ್ಕಾರ / ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳು/ ವಿಶ್ವವಿದ್ಯಾನಿಲಯಗಳ ಪೂರ್ಣಾವಧಿ ಕೋರ್ಸುಗಳಲ್ಲಿ ಅಭ್ಯಸಿಸುತ್ತಿರಬೇಕು.<br>2. ವಿದ್ಯಾರ್ಥಿಗಳು ವಾಸಸ್ಥಳದಿಂದ ವಿದ್ಯಾಸಂಸ್ಥೆವರೆಗೆ ಪ್ರಯಾಣಿಸಲು, ಗರಿಷ್ಠ ಪ್ರಯಾಣ ಮಿತಿ 60 ಕಿ.ಮೀವರೆಗೆ ವಿದ್ಯಾರ್ಥಿ ಬಸ್ ಪಾಸ್ ವಿತರಿಸಲಾಗುತ್ತಿದೆ.<br>3. ಭರ್ತಿಗೊಳಿಸಿದ ಅರ್ಜಿಯನ್ನು ಶಾಲೆ / ಕಾಲೇಜಿನ ಮುಖ್ಯಸ್ಥರಿಂದ ದೃಢೀಕರಿಸಿರಬೇಕು.<br>4. ಪ್ರಸಕ್ತ ಸಾಲಿನಲ್ಲಿ ವಿದ್ಯಾಸಂಸ್ಥೆಗೆ ಶುಲ್ಕ ಪಾವತಿಸಿರುವ ರಸೀದಿಯನ್ನು ಹಾಜರುಪಡಿಸಬೇಕು. ಶಾಲಾ/ಕಾಲೇಜಿನ ಗುರುತಿನ ಚೀಟಿಯನ್ನು ಪಾಸು ಪಡೆಯುವ ವೇಳೆ ಹಾಜರುಪಡಿಸುವುದು.<br>5. ಎರಡು ಭಾವಚಿತ್ರಗಳು ಹಾಗೂ ನಿಗದಿತ ಪಾಸಿನ ಶುಲ್ಕವನ್ನು ಸಲ್ಲಿಸುವುದು.<br>6. 2017-18 ನೇ ಸಾಲಿನಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ ಮಾಡುತ್ತಿರುವುದರಿಂದ, ಸದರಿ ವರ್ಗದ ವಿದ್ಯಾರ್ಥಿಗಳು ಕಡ್ಡಾಯವಾಗಿ ಜಾತಿ ಪ್ರಮಾಣ ಪತ್ರವನ್ನು ಲಗತ್ತಿಸಬೇಕು ಪರಿಶೀಲನೆಗೆ ಮೂಲ ಜಾತಿ ಪ್ರಮಾಣ ಪತ್ರವನ್ನು ಹಾಜರುಪಡಿಸಬೇಕು.<br>7. ವಿದ್ಯಾರ್ಥಿಗಳ ಅನುಕೂಲಕ್ಕೆ ತಕ್ಕಂತೆ 05 ಹಾಗೂ 10 ತಿಂಗಳಿಗೆ ಬಸ್ ಪಾಸ್ ವಿತರಿಸಲಾಗುತ್ತಿದೆ.<br>8. ಸಾರಿಗೆ ಸಂಸ್ಥೆಗಳ ಬಸ್ಸುಗಳ ಆಚರಣೆ ಇರುವ ಮಾರ್ಗಗಳಿಗೆ ಮಾತ್ರ ಬಸ್ ಪಾಸ್‌ಗಳನ್ನು ವಿತರಿಸಲಾಗುತ್ತಿದೆ. |

| | | |
|---|---|---|
| ಇ) | ಉಚಿತ ಬಸ್‌ಪಾಸ್ ಸೌಲಭ್ಯವನ್ನು ಎಲ್ಲಾ ವಿದ್ಯಾರ್ಥಿಗಳಿಗೂ ನೀಡಲು ಸರ್ಕಾರ ಚಿಂತಿಸಿದೆಯೇ; | ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ (7ನೇ ತರಗತಿಯವರೆಗೆ), ಉಚಿತ ಹಾಗೂ ಉಳಿದ ಎಲ್ಲಾ ಇತರೆ ವಿದ್ಯಾರ್ಥಿಗಳಿಗೆ (8ನೇ ತರಗತಿ ಮೇಲ್ಪಟ್ಟ ಎಲ್ಲಾ ಶಾಲಾ ಕಾಲೇಜು)ಗಳಿಗೆ ರಿಯಾಯಿತಿ ಬಸ್ ಪಾಸ್ ಒದಗಿಲಾಗುತ್ತಿದೆ. 2017-18ನೇ ಸಾಲಿನಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಹಾಗೂ ಇತರೆ ಎಲ್ಲಾ ವಿದ್ಯಾರ್ಥಿಗಳಿಗೆ ರಿಯಾಯಿತಿ ಬಸ್ ಪಾಸ್ ಒದಗಿಸಲಾಗುತ್ತಿದೆ. |
| ಈ) | ಉಚಿತ ಬಸ್‌ಪಾಸ್ ವಿತರಣೆಯಲ್ಲಿ ಅನುಸರಿಸಲಾಗುವ ಮಾನದಂಡಗಳೇನು; | ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಮತ್ತು ಎಲ್ಲಾ ತರಗತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸು ವಿತರಣೆಗೆ ಅನುಸರಿಸುತ್ತಿರುವ ಮಾನದಂಡಗಳು ಈ ಕೆಳಕಂಡಂತಿವೆ.<br><br>**ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ:**<br>ಶಿಕ್ಷಣ ಇಲಾಖೆಯಿಂದ ಮಾನ್ಯತೆ ಪಡೆದ ಎಲ್ಲಾ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸುಗಳನ್ನು ವಿತರಿಸಲಾಗುತ್ತಿದೆ.<br><br>**ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು:**<br>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ 60 ಕಿ.ಮೀ ವ್ಯಾಪ್ತಿಯವರೆಗೆ ಜಾತಿ ಪ್ರಮಾಣ ಪತ್ರದ ಧೃಢೀಕರಣದ ಆಧಾರದ ಮೇಲೆ ಉಚಿತ ಪಾಸ್ ವಿತರಣೆ ಮಾಡಲಾಗುತ್ತಿದೆ. |
| ಉ) | ಈ ಸೌಲಭ್ಯವನ್ನು ಎಂದಿನಿಂದ ಜಾರಿಗೆ ತರಲಾಗುವುದು? | ಈ ಕುರಿತಂತೆ ಪ್ರಶ್ನೆ 'ಇ' ರಲ್ಲಿ ಉತ್ತರಿಸಲಾಗಿದೆ. |

ಸಾರಿಇ 163 ಸಾಸಂಪ್ರ 2018

(ಡಿ.ಸಿ.ತಮ್ಮಣ್ಣ)
ಸಾರಿಗೆ ಸಚಿವರು